**Akashvani: Bangalore**
**Regional Bulletin In Kannada**
**23.04.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು :**

1. ಎಸ್‌ಎಸ್‌ಎಲ್‌ಸಿ ಪರೀಕ್ಷೆ-೧ರ ಫಲಿತಾಂಶ ಪ್ರಕಟ: ದಕ್ಷಿಣ ಕನ್ನಡ ಜಿಲ್ಲೆ ಪ್ರಥಮ; ೭ ವಿದ್ಯಾರ್ಥಿಗಳಿಗೆ ೬೨೫ಕ್ಕೆ ೬೨೫ ಅಂಕ
2. ರಾಜ್ಯದಲ್ಲಿ ಸುಗಮವಾಗಿ ನಡೆದ ಸಾಮಾನ್ಯ ಪ್ರವೇಶ ಪರೀಕ್ಷೆ; ಮೇಲ್ವಿಚಾರಣೆಗೆ ೨೦ ಸಾವಿರ ಸಿಬ್ಬಂದಿ ನಿಯೋಜನೆ
3. ಪ್ರಧಾನಿ ವಿರುದ್ಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿಕೆ ಖಂಡಿಸಿ ವಿಧಾನಸೌಧ ಮುಂಭಾಗದಲ್ಲಿ ಬಿಜೆಪಿ ಪ್ರತಿಭಟನೆ
4. ಅಮೆರಿಕ ಮಹಿಳಾ ಪ್ರವಾಸಿ ಮೇಲೆ ಲೈಂಗಿಕ ದೌರ್ಜನ್ಯ ಪ್ರಕರಣ; ಕೊಡಗಿನಲ್ಲಿ ವಿದೇಶಾಂಗ ಸಚಿವಾಲಯದ ಅಧಿಕಾರಿಗಳಿಂದ ಪರಿಶೀಲನೆ
5. ಚಾಮರಾಜನಗರದಲ್ಲಿ ಚಿಕಿತ್ಸೆಗೆ ಸ್ಪಂದಿಸದೆ ಸಲಗ ಸಾವು; ಚಿಕ್ಕಮಗಳೂರಿನಲ್ಲಿ ಅರಣ್ಯ ಸಿಬ್ಬಂದಿ ಮೇಲೆ ಕಾಡಾನೆ ದಾಳಿ

*************

ಎಸ್‌ಎಸ್‌ಎಲ್‌ಸಿ ಪರೀಕ್ಷೆ-೧ರ ಫಲಿತಾಂಶ ಪ್ರಕಟಗೊಂಡಿದ್ದು, ಇದೇ ಮೊದಲ ಬಾರಿಗೆ ಶೇಕಡ ೯೪.೧೦ಯಷ್ಟು ಫಲಿತಾಂಶ ಬಂದಿದೆ. ದಕ್ಷಿಣ ಕನ್ನಡ ಜಿಲ್ಲೆ ಪ್ರಥಮ, ಉಡುಪಿ ದ್ವಿತೀಯ, ಉತ್ತರ ಕನ್ನಡ ತೃತೀಯ ಸ್ಥಾನ ಪಡೆದುಕೊಂಡಿದೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಎಸ್‌ಎಂಎಸ್, ವಾಟ್ಸ್‌ಆಪ್ ಮೂಲಕವೂ ಫಲಿತಾಂಶ ಕಳುಹಿಸಲಾಗಿದೆ ಎಂದು ತಿಳಿಸಿದ್ದಾರೆ.

****ಧ್ವನಿ**** ಮಧು ಬಂಗಾರಪ್ಪ

ಈ ಬಾರಿ ಪರೀಕ್ಷೆಗೆ ಹಾಜರಾಗಿದ್ದ ೭ ಲಕ್ಷದ ೭೦ ಸಾವಿರದ ೨೦೯ ವಿದ್ಯಾರ್ಥಿಗಳ ಪೈಕಿ ೭ ಲಕ್ಷದ ೨೪ ಸಾವಿರದ ೭೯೪ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಈ ಬಾರಿಯೂ ಬಾಲಕಿಯರೆ ಮೇಲುಗೈ ಸಾಧಿಸಿದ್ದಾರೆ. ಏಳು ವಿದ್ಯಾರ್ಥಿಗಳು ೬೨೫ಕ್ಕೆ ೬೨೫ ಅಂಕ ಪಡೆಯುವ ಮೂಲಕ ಸಾಧನೆ ಮೆರೆದಿದ್ದಾರೆ. ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಕಟಗೇರಿ ಗ್ರಾಮದ ಸರ್ಕಾರಿ ಶಾಲೆಯ ಪ್ರಾರ್ಥನಾ ಬಿರಾದಾರ ೬೨೫ಕ್ಕೆ ೬೨೫ ಅಂಕ ಪಡೆದಿದ್ದಾರೆ.

*************

ಚಿಕ್ಕಮಗಳೂರು ನಗರದ ಸೆಂಟ್ ಮೇರಿಸ್ ಶಾಲೆಯ ವಿದ್ಯಾರ್ಥಿನಿ ಬೃಂದಾ ೬೨೫ ಅಂಕಗಳನ್ನು ಪಡೆದು ಉತೀರ್ಣರಾಗಿದ್ದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ. ವಿಷಯವಾರು ಶೇಕಡಾ ೧೦೦% ಫಲಿತಾಂಶ ಪಡೆದು ಜಿಲ್ಲೆ ಹಾಗು ರಾಜ್ಯ ಮಟ್ಟದಲ್ಲಿ ಅಗ್ರ ಸ್ಥಾನ ಪಡೆದಿದ್ದಾರೆ. ಆಕಾಶವಾಣಿಯೊಂದಿಗೆ ಬೃಂದಾ ಸಂತಸ ಹಂಚಿಕೊಂಡಿದ್ದಾರೆ.

*************

ಇಂಜಿನಿಯರಿಂಗ್ ಸೇರಿದಂತೆ ಇತರ ವೃತ್ತಿಪರ ಕೋರ್ಸ್ ಗಳ ಪ್ರವೇಶಕ್ಕೆ ಇಂದು ಮತ್ತು ನಾಳೆ ಸಿಇಟಿ ಪರೀಕ್ಷೆ ನಡೆಯಲಿದೆ. ಭೌತಶಾಸ್ತ್ರ ಹಾಗೂ ರಸಾಯನಶಾಸ್ತ್ರ ವಿಷಯಗಳ ಪರೀಕ್ಷೆಗಳು ಇಂದು ನಡೆಯುತ್ತಿವೆ. ಪರೀಕ್ಷೆ ಸುಗಮವಾಗಿ ನಡೆಸುವ ಹಿನ್ನೆಲೆಯಲ್ಲಿ ವಿವಿಧ ಹಂತಗಳಲ್ಲಿ ಒಟ್ಟು ೨೦ ಸಾವಿರ ಸಿಬ್ಬಂದಿ ನಿಯೋಜಿಸಲಾಗಿದೆ. ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನೇತೃತ್ವದಲ್ಲಿ ಉಸ್ತುವಾರಿ ಮಾಡಲಾಗುತ್ತಿದೆ. ಪರೀಕ್ಷಾ ಅಕ್ರಮಗಳು ನಡೆಯದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ತಿಳಿಸಿದೆ. ಸೂಕ್ಷ್ಮ ಪರೀಕ್ಷಾ ಕೇಂದ್ರಗಳಲ್ಲಿ, ಮೊಬೈಲ್ ಜಾಮರ್ ಗಳನ್ನು ಅಳವಡಿಸಲಾಗಿದೆ. ನ್ಯಾಯಯುತ, ಪಾರದರ್ಶಕ ಪರೀಕ್ಷೆ ನಡೆಸಲು ಎಲ್ಲ ಅಗತ್ಯ ಕ್ರಮಗಳನ್ನು ಪರೀಕ್ಷಾ ಪ್ರಾಧಿಕಾರ ತೆಗೆದುಕೊಂಡಿದೆ. ಈ ಬಾರಿ ವಸ್ತ್ರ ಸಂಹಿತೆ ವಿಷಯದಲ್ಲಿ ಗೊಂದಲ ಆಗಬಾರದು ಎನ್ನುವ ಹಿನ್ನೆಲೆಯಲ್ಲಿ, ಪ್ರತಿ ಪರೀಕ್ಷಾ ಕೇಂದ್ರಕ್ಕೆ ವಸ್ತ್ರ ಸಂಹಿತೆ ಅಧಿಕಾರಿಯನ್ನು ನೇಮಕ ಮಾಡಲಾಗಿದೆ. ದಾವಣಗೆರೆ, ದಕ್ಷಿಣ ಕನ್ನಡ, ಉಡುಪಿ, ಬೆಂಗಳೂರು ಸೇರಿದಂತೆ ರಾಜ್ಯದೆಲ್ಲೆಡೆ ಬಿಗಿ

ಭದ್ರತೆ ನಡುವೆ ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. ದಾವಣಗೆರೆಯ ೨೦ ಕೇಂದ್ರಗಳಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ಸುಗಮವಾಗಿ ನಡೆಯಿತು. ಪರೀಕ್ಷೆಗಾಗಿ ೧೨ ಸಾವಿರದ ೬೧೬ ವಿದ್ಯಾರ್ಥಿಗಳು ಹೆಸರು ನೊಂದಾಯಿಸಿದ್ದು, ಯಾವುದೇ ಅಕ್ರಮಗಳಿಗೆ ಅವಕಾಶವಾಗದಂತೆ ಪದವಿ ಪೂರ್ವ ಶಿಕ್ಷಣ ಇಲಾಖೆ ಅಗತ್ಯ ಮುಂಜಾಗ್ರತ ಕ್ರಮಗಳನ್ನು ಕೈಗೊಂಡಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ೫ ಪರೀಕ್ಷಾ ಕೇಂದ್ರಗಳಲ್ಲಿ ಮೊದಲ ದಿನದ ಭೌತವಿಜ್ಞಾನ, ರಸಾಯನಶಾಸ್ತ್ರ ವಿಷಯದ ಪರೀಕ್ಷೆ ಸುಗಮವಾಗಿ ನಡೆದಿದೆ.

*************

ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿದ ಹೇಳಿಕೆ ಖಂಡಿಸಿ, ವಿಧಾನಸೌಧದ ಆವರಣದಲ್ಲಿರುವ ಮಹಾತ್ಮ ಗಾಂಧಿ ಪ್ರತಿಮೆ ಬಳಿ ಬಿಜೆಪಿ ನಾಯಕರು ಇಂದು ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು. ಈ ವೇಳೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರಧಾನಿ ವಿರುದ್ಧ ನೀಡಿದ ಹೇಳಿಕೆ ಕಾಂಗ್ರೆಸ್ ಪಕ್ಷದ ದ್ವೇಷ ಹಾಗೂ ಕೀಳು ರಾಜಕೀಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇಂತಹ ಬೇಜವಾಬ್ದಾರಿ ಹೇಳಿಕೆ ಪ್ರಜಾಪ್ರಭುತ್ವಕ್ಕೆ ಮಾಡುವ ಅವಮಾನ ಎಂದು ತಿಳಿಸಿದ್ದಾರೆ. ರಾಜ್ಯದ ಜನರೇ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

*************

ಕೊಡಗಿನ ವಿರಾಜಪೇಟೆಯಲ್ಲಿ ಅಮೆರಿಕ ಮಹಿಳಾ ಪ್ರವಾಸಿ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಹೋಮ್‌ಸ್ಟೇ ಪರವಾನಗಿಯನ್ನು ಪ್ರವಾಸೋದ್ಯಮ ಇಲಾಖೆ ರದ್ದುಗೊಳಿಸಿ, ಆದೇಶ ಹೊರಡಿಸಿದೆ. ಪ್ರವಾಸಕ್ಕೆಂದು ಭಾರತಕ್ಕೆ ಬಂದಿದ್ದ ಅಮೆರಿಕ ಪ್ರವಾಸಿ ಕುಟ್ಟಾ ಗ್ರಾಮದ ಹೋಂಸ್ಟೇಯಲ್ಲಿ ತಂಗಿದ್ದರು. ಪ್ರವಾಸಿಗರ ಸುರಕ್ಷತೆ ಖಚಿತಪಡಿಸಿಕೊಳ್ಳುವಲ್ಲಿ ವಿಫಲತೆ ಹಾಗೂ ಕಾನೂನುಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗಿರುವುದನ್ನು ಉಲ್ಲೇಖಿಸಿ, ಜಿಲ್ಲೆಯ ಎಲ್ಲಾ ಹೋಂಸ್ಟೇಗಳು ಪ್ರವಾಸಿ ಸುರಕ್ಷತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಜಿಲ್ಲಾಡಳಿತ ಕಟ್ಟುನಿಟ್ಟಿನ ಸೂಚನೆ ನೀಡಿದೆ. ಈ ನಡುವೆ, ಘಟನೆ ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ದೆಹಲಿ ಮತ್ತು ಚೆನ್ನೈನ ವಿದೇಶಾಂಗ ಸಚಿವಾಲಯದ ಅಧಿಕಾರಿಗಳು ಕೊಡಗಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

*************

ಮಲೆ ಮಹದೇಶ್ವರ ವನ್ಯಜೀವಿಧಾಮದ ಅಜ್ಜೀಪುರ ಸಮೀಪದ ಉಡುತೊರೆ ಹಳ್ಳ ಜಲಾಶಯಕ್ಕೆ ನೀರು ಕುಡಿಯಲು ಬಂದು ಕೆಸರಿನಲ್ಲಿ ಸಿಲುಕಿಕೊಂಡು ನಿತ್ರಾಣಗೊಂಡಿದ್ದ ಹೆಣ್ಣಾನೆ ಚಿಕಿತ್ಸೆಗೆ ಸ್ಪಂದಿಸದೆ ಸಾವನ್ನಪ್ಪಿದೆ.ಶನಿವಾರ ಸಂಜೆ ೪ ಕಾಡಾನೆಗಳು ನೀರು ಕುಡಿಯಲು ಉಡುತೊರೆ ಹಳ್ಳ ಜಲಾಶಯಕ್ಕೆ ಬಂದಿದ್ದವು. ಈ ಪೈಕಿ ಕಾಡಾನೆಗಳನ್ನು ಅರಣ್ಯ ಇಲಾಖೆ ಅಧಿಕಾರಿಗಳು ರಕ್ಷಿಸಿದ್ದಾರೆ. ಎರಡು ಆನೆಗಳು ಚೇತರಿಸಿಕೊಂಡು ಕಾಡಿನತ್ತ ತೆರಳಿದ್ದವು. ತೀವ್ರವಾಗಿ ನಿತ್ರಾಣಗೊಂಡಿದ್ದ ಒಂದು ಹೆಣ್ಣಾನೆಗೆ ನಾಗರಹೊಳೆ ಹುಲಿ ಸಂರಕ್ಷಿತ ಅರಣ್ಯ ಪ್ರದೇಶದ ಪಶುವೈದ್ಯಾಧಿಕಾರಿ ಡಾ. ರಮೇಶ್ ಚಿಕಿತ್ಸೆ ನೀಡಿದರೂ ಆನೆ ಚೇತರಿಸಿಕೊಳ್ಳದೆ ಮೃತಪಟ್ಟಿದೆ.

*************

ಕರ್ತವ್ಯದ ವೇಳೆ ಇಬ್ಬರು ಅರಣ್ಯ ಸಿಬ್ಬಂದಿಗಳ ಮೇಲೆ ಕಾಡಾನೆಯೊಂದು ದಾಳಿ ನಡೆಸಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಗೌತಹಳ್ಳಿ ಗ್ರಾಮದ ಅರಣ್ಯ ಪ್ರದೇಶದಲ್ಲಿ ನಡೆದಿದೆ. ಕಾಡಾನೆಗಳ ಚಲನ ವಲನ ಗಮನಿಸಿ ಸಾರ್ವಜನಿಕರಿಗೆ ಮಾಹಿತಿ ನೀಡುವ ಕಾರ್ಯಾಚರಣೆಯಲ್ಲಿ ನಿರತರಾಗಿದ್ದ ಇ.ಟಿ.ಎಫ್ ಅರಣ್ಯ ಸಿಬ್ಬಂದಿ ರಮೇಶ್ ಹಾಗೂ ಹೊರಗುತ್ತಿಗೆ ಅರಣ್ಯ ನೌಕರ ವಿಶ್ವ ಎಂಬುವವರ ಮೇಲೆ ಆನೆ ದಾಳಿ ನಡೆಸಿದ್ದು ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ಮೂಡಿಗೆರೆ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

*************

ದಿನದಿಂದ ದಿನಕ್ಕೆ ಏರುತ್ತಿರುವ ಬಿಸಿಲಿನ ತಾಪದಿಂದ ರಕ್ಷಣೆ ಪಡೆಯಲು ಹಾಗೂ ಸಾರ್ವಜನಿಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ದಾವಣಗೆರೆ ಜಿಲ್ಲಾ ಆಯುಷ್ ಇಲಾಖೆಯು ಮುನ್ನೆಚ್ಚರಿಕಾ ಕ್ರಮಗಳ ಮಾರ್ಗಸೂಚಿ ಪ್ರಕಟಿಸಿದೆ. ನೈಸರ್ಗಿಕ ಆಹಾರ ಪದ್ಧತಿ ಮತ್ತು ಆಯುರ್ವೇದ ಚಿಕಿತ್ಸಾ ಕ್ರಮಗಳ ಮೂಲಕ ಈ ಬೇಸಿಗೆಯನ್ನು ಸಮರ್ಥವಾಗಿ ಎದುರಿಸಲು ಇಲಾಖೆಯು ಕೆಲವು ಸರಳ ಉಪಾಯಗಳನ್ನು ಸೂಚಿಸಿದೆ. ಬೇಸಿಗೆಯಲ್ಲಿ ದೇಹದ ಉಷ್ಣಾಂಶ ಸಮತೋಲನದಲ್ಲಿಡಲು ಫ್ರಿಡ್ಜ್ ನೀರಿಗಿಂತ ಮಣ್ಣಿನ

ಮಡಕೆಯಲ್ಲಿ ಸಂಗ್ರಹಿಸಿದ ನೀರನ್ನು ಕುಡಿಯುವುದು ಉತ್ತಮವಾಗಿದೆ. ರಾಗಿ ಅಂಬಲಿ, ಮಜ್ಜಿಗೆ ಹಾಗೂ ನೈಸರ್ಗಿಕವಾಗಿ ದೊರೆಯುವ ಎಳನೀರು ಸೇವನೆಯಿಂದ ನಿರ್ಜಲೀಕರಣ ತಡೆಯಬಹುದು ಎಂದು ಆಯುಷ್ ಇಲಾಖೆ ತಿಳಿಸಿದೆ.ಸೌತೆಕಾಯಿ, ಕಲ್ಲಂಗಡಿ, ದ್ರಾಕ್ಷಿ, ಕಿತ್ತಳೆಯಂತಹ ನೀರಿನಂಶ ಹೆಚ್ಚಿರುವ ಹಣ್ಣುಗಳು ಹಾಗೂ ಹಸಿರು ತರಕಾರಿಗಳಿಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದೆ

*************

ನಗರೀಕರಣದಲ್ಲಿ ಗ್ರಾಮೀಣ ಸಂಸ್ಕೃತಿ ಸೊಗಡು ಮುಳುಗಿ ಹೋಗಬಾರದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ. ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲೂಕಿನ ಬೆಟ್ಟ ಕುಸುಗಲ್ಲ ಗ್ರಾಮದಲ್ಲಿ ಮಾತನಾಡಿದ ಅವರು, ಈ ಸಂಸ್ಕೃತಿ ಸೊಗಡು ನಗರೀಕರಣದಲ್ಲಿ ಮುಳುಗಿ ಹೋಗಬಾರದು ಎಂದು ತಿಳಿಸಿದ್ದಾರೆ. ಕುಸುಗಲ್ಲ ಗ್ರಾಮದಲ್ಲಿ ಪಿಯುಸಿ ಹಾಗೂ  ಡಿಗ್ರಿ ಕಾಲೇಜು ಆರಂಭಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

*************

**ಸಂಕ್ಷಿಪ್ತ ಸುದ್ದಿ**

೧. ಕೋಲಾರದಲ್ಲಿ ಬಿಸಿಲಿನ ತಾಪ ಹೆಚ್ಚಾಗಿದ್ದು, ಮನೆಪಟ್ಟಿ ಮತ್ತು ಮನೆಗಣತಿ ಮಾಡುವ ಗಣತಿದಾರರು ವೈಯುಕ್ತಿಕವಾಗಿ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ.

೨. ಬೀದಿಬದಿ ವ್ಯಾಪಾರಿಗಳಿಗೆ ಪಿಎಂ ಸ್ವಾನಿಧಿ ಯೋಜನೆಯಡಿ ಸಾಲಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಇದನ್ನು ಸದುಪಯೋಗ ಪಡಿಸಿಕೊಳ್ಳಿ ಎಂದು ಮದ್ದೂರು ತಾಲ್ಲೂಕು ಮುಖ್ಯಕಾರ್ಯನಿರ್ವಹಣಾಧಿಕಾರಿ ರಾಮಲಿಂಗಯ್ಯ ತಿಳಿಸಿದ್ದಾರೆ.

೩. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಇಂದು ಮಹರ್ಷಿ ಭಗೀರಥ ಜಯಂತಿ ಆಚರಿಸಲಾಯಿತು. ದೊಡ್ಡಬಳ್ಳಾಪುರದ ತಾಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ  ನಡೆದ ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಮಲ್ಲಪ್ಪ.ಕೆ.ಯರಗೋಳ ಭಗೀರಥರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

******END*******